# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 874

ಸದಸ್ಯರ ಹೆಸರು : ಶ್ರೀ ಪ್ರತಾಪ ಸಿಂಹ ನಾಯಕ್ ಕೆ.

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 24.07.2024

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ದಕ್ಷಿಣ ಕನ್ನಡ ಜಿಲ್ಲೆಯ ಸಿದ್ಧಬೈಲು ಪರಾರಿ ಮುಂಡ್ರುಪ್ಪಾಡಿ ಕೂಟದಕಲ್ಲು ಮಾರ್ಗವಾಗಿ ಧರ್ಮಸ್ಥಳಕ್ಕೆ ಸಂಚರಿಸುವ ಬಸ್ ಮಾರ್ಗವನ್ನು ವಿದ್ಯಾಭ್ಯಾಸಕ್ಕಾಗಿ ಉಜಿರೆಗೆ ತೆರಳುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಉಜಿರೆವರೆಗೆ ವಿಸ್ತರಿಸಬೇಕೆಂಬ ಬೇಡಿಕೆ ತುಂಬಾ ದಿನದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ 2023-24ರ ಪೂರ್ವದ 07 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಯಾಗಿರುವುದಿಲ್ಲ. ಅಲ್ಲದೆ 4 ವರ್ಷಗಳಲ್ಲಿ ಹೊಸ ಬಸ್‌ಗಳು ಸೇರ್ಪಡೆಯಾಗಿರುವುದಿಲ್ಲ. ಆದ್ದರಿಂದ ಸ್ವಲ್ಪ ಅನಾನುಕೂಲವಾಗಿರುತ್ತದೆ.** |
| ಆ. | ಬಂದಿದ್ದಲ್ಲಿ, ಧರ್ಮಸ್ಥಳದವರೆಗೆ ಮಾತ್ರ ಇರುವ ಪ್ರಸ್ತುತ ಬಸ್ ಮಾರ್ಗದ ವ್ಯವಸ್ಥೆಯನ್ನು ಉಜರೆವರೆಗೆ ವಿಸ್ತರಿಸಲು ಇದುವರೆಗೆ ಕ್ರಮ ವಹಿಸದಿರಲು ಕಾರಣಗಳೇನು; | ಪ್ರಸ್ತುತ ಸಾರ್ವಜನಿಕ ಪ್ರಯಾಣಿಕರು/ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ದಿನಾಂಕ 08-07-2024ರಿಂದ ಜಾರಿಗೆ ಬರುವಂತೆ ಸಿದ್ಧಬೈಲು-ಪರಾರಿ-ಮುಂಡ್ರುಪಾಡಿ-ಕೂಟದಕಲ್ಲು ಮಾರ್ಗವಾಗಿ ಧರ್ಮಸ್ಥಳಕ್ಕೆ ಕಾರ್ಯಾಚರಣೆಯಲ್ಲಿದ್ದ 04 ಸುತ್ತುವಳಿಗಳನ್ನು ಉಜಿರೆವರೆಗೆ ವಿಸ್ತರಿಸಲಾಗಿದೆ. |
| ಇ. | ಗ್ರಾಮೀಣ ವಿದ್ಯಾರ್ಥಿಗಳಿಗೆ ಅತ್ಯಂತ ಅತ್ಯಾವಶ್ಯಕವಾಗಿ ಬೇಕಾಗಿರುವ ಸದರಿ ಬಸ್ ಮಾರ್ಗದ ವ್ಯವಸ್ಥೆಯನ್ನು ವಿಸ್ತರಿಸುವುದರ ಜೊತೆಗೆ ಶಾಲಾ ದಿನಗಳಲ್ಲಿ ಮಾತ್ರ ಲಭ್ಯವಿರುವ ಈ ಬಸ್ ವ್ಯವಸ್ಥೆಯನ್ನು ವರ್ಷವಿಡೀ ಒದಗಿಸುವ ಮೂಲಕ ವಿದ್ಯಾರ್ಥಿಗಳಿಗೆ ಹಾಗೂ ಗ್ರಾಮಸ್ಥರಿಗೆ ಯಾವ ಕಾಲಮಿತಿಯೊಳಗೆ ಅನುಕೂಲ ಮಾಡಿಕೊಡಲಾಗುವುದು? | ನಿಯಮಿತವಾಗಿ ಕಾರ್ಯಾಚರಣೆಗೊಳಿಸಲು ಕ್ರಮ ಕೈಗೊಳ್ಳಲಾಗಿರುವ ಈ ಮಾರ್ಗದ ಬಸ್ಸಿನ ಅನುಕೂಲತೆಯು ಗ್ರಾಮೀಣ ವಿದ್ಯಾರ್ಥಿಗಳ ಮತ್ತು ಗ್ರಾಮಸ್ಥರ ಅವಶ್ಯಕತೆಗನುಗುಣವಾಗಿರುತ್ತದೆ. |

ಸಂಖ್ಯೆ: ಟಿಡಿ 139 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು